ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯದಲ್ಲಿ, ಜೇವರಗಿ

ಕ್ರಿಮಿನಲ್ ಮೊಕದ್ದಮೆ ಸಂಖ್ಯೆ: **322/2018**

ಚಾ.ಸಾ-**4**
ಪ್ರಾ.ಸಾ-**1**

ಸಾಕ್ಷಿಗೆ ದಿನಾಂಕ **25-07-2023** ರಂದು ಪ್ರಮಾಣ ವಚನ ಬೋಧಿಸಲಾಯಿತು.

| | | |
|---|---|---|
| ಸಾಕ್ಷಿಯ ಹೆಸರು | ಃ | ನಾಗಣ್ಣ ಹೆಗ್ಗಣೆ |
| ತಂದೆಯ ಹೆಸರು | ಃ | ಸಿದ್ದಣ್ಣ |
| ವಯಸ್ಸು | ಃ | 50 ವರ್ಷ |
| ಉದ್ಯೋಗ | ಃ | ಒಕ್ಕಲುತನ |
| ವಾಸಸ್ಥಳ | ಃ | ಗೂಡುರು |

ಮುಖ್ಯವಿಚಾರಣೆ ಮಾನ್ಯ ಸ.ಸ.ಅ ರವರಿಂದ

ಆರೋಪಿತರು ಗೊತ್ತಿಲ್ಲ. ಚಾಸಾ-1, 5 ಗೊತ್ತಿಲ್ಲ. ಮೃತ ಮಲ್ಲಣ್ಣ ಗೊತ್ತಿಲ್ಲ.

ಸಾಕ್ಷಿಗೆ ಒಂದು ದಾಖಲೆಯನ್ನು ತೋರಿಸದಾಗಿ ಅದು ಸ್ಥಳ ಪಂಚನಾಮೆಯಾಗಿದ್ದು, ಸದರಿ ದಾಖಲೆಯನ್ನು ನಿಪಿ-1 ಎಂದು ಸಾಕ್ಷಿ ಸಹಿಯನ್ನು ನಿಪಿ-1(ಎ) ಎಂದು ಗುರುತಿಸಲಾಯಿತು. ನಿಪಿ-1 ರ ದಾಖಲೆಗೆ 2 ವರ್ಷಗಳ ಹಿಂದೆ ಪೊಲೀಸ್ ಠಾಣೆಯಲ್ಲಿ ಸಹಿ ಮಾಡಿರುತ್ತೇನೆ. ಪೋಲಿಸರು ನಿಪಿ-1 ಕ್ಕೆ ಸಹಿ ಮಾಡು ಅಂತಾ ಹೇಳಿದ ಕಾರಣ ಸಹಿ ಮಾಡಿರುತ್ತೇನೆ. ನಿಪಿ-1 ರಲ್ಲಿ ಬರೆದಂತಹ ವಿಚಾರಗಳು ನನಗೆ ಗೊತ್ತಿಲ್ಲ. ಪೋಲಿಸರು ನನ್ನ ಸಮಕ್ಷಮ ಪಂಚನಾಮೆ ಮಾಡಿಲ್ಲ. ನನ್ನ ಸಮಕ್ಷಮ ಯಾವುದೇ ವಾಹನಗಳನ್ನು ವಶಪಡಿಸಿಕೊಂಡಿಲ್ಲ. ಪೋಲಿಸರು ನಿಪಿ-1 ದಾಖಲೆಯಲ್ಲಿ ಬರೆದಂತಹ ವಿಚಾರಗಳನ್ನು ನನಗೆ ಓದಿ ಹೇಳಿಲ್ಲ.

(ಮಾನ್ಯ ಸ.ಸ.ಅ ರವರು ಸಾಕ್ಷಿ ಪ್ರತಿಕೂಲವಾಗಿ ಸಾಕ್ಷಿ ನುಡಿದಿದ್ದಾರೆ ಹಾಗಾಗಿ ಅವರನ್ನು ಪ್ರತಿಕೂಲ ಸಾಕ್ಷಿ ಎಂದು ಘೋಷಿಸಿ ಪಾಟೀ ಸವಾಲು ಮಾಡಲು ಅನುಮತಿ ನೀಡಬೇಕೆಂದು ಕೋರಿದ್ದು, ಮುಖ್ಯ ವಿಚಾರಣೆಯಲ್ಲಿ ಸಾಕ್ಷಿ ಅಭಿಯೋಜನೆಯ ಪ್ರಕರಣಕ್ಕೆ ವ್ಯತಿರಿಕ್ತವಾಗಿ ಸಾಕ್ಷ್ಯ ನುಡಿದಿರುವುದು ಮೇಲ್ನೋಟಕ್ಕೆ ಕಂಡುಬಂದಿರುವ ಕಾರಣ ಮಾನ್ಯ ಅಭಿಯೋಜನೆಯವರಿಗೆ ಪಾಟೀಸವಾಲು ಮಾಡಲು ಅನುಮತಿಸಲಾಯಿತು)

ಪಾಟೀ ಸವಾಲು ಮಾನ್ಯ ಸ.ಸ.ಅ.ರವರಿಂದ

ದಿನಾಂಕ 14-03-2015 ರಂದು ಬೆಳಿಗ್ಗೆ 09-30 ರಿಂದ 10-30 ಗಂಟೆವರೆಗೆ ಮುದಬಾಳ ಕೆ ಕ್ರಾಸ್ ಹತ್ತಿರವಿರುವ ಪರಶುರಾಮನಾಯಕರವರ ಜಮೀನಿನ ಬಳಿ ಇರುವ ಶಹಾಪುರ-ಜೇವರ್ಗಿ ರಸ್ತೆಯ ಮೇಲೆ ಪೋಲಿಸರು ನನ್ನ ಮತ್ತು ಚಾಸಾ-5 ರವರ ಸಮಕ್ಷಮ ನಿಪಿ-1 ರಂತೆ ಸ್ಥಳ ಹಾಗೂ ವಾಹನಗಳ ಜಪ್ತಿ ಪಂಚನಾಮೆ ಜರುಗಿಸಿರುತ್ತಾರೆ ಎಂದರೆ ಸರಿಯಲ್ಲ. ಪೋಲಿಸರು ಪಂಚನಾಮೆ

ಸಮಯದಲ್ಲಿ ಲಾರಿ ನಂ.ಎಂ.ಹೆಚ್.-38 ಡಿ-0514 ಹಾಗೂ ಕ್ರೂಸರ್ ವಾಹನ ನಂ.ಕೆಎ-32 ಎಂ.-6243 ರ ವಾಹನಗಳನ್ನು ಅಪಘಾತದ ವಿಚಾರವಾಗಿ ಜಪ್ತಿಪಡಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ಸಾಕ್ಷಿಗೆ ಎರಡು ಕ್ರೂಸರ್ ಹಾಗೂ ಎರಡು ಲಾರಿ ಫೋಟೊಗಳನ್ನು ತೋರಿಸಲಾಗಿ ಅದರಲ್ಲಿರುವ ವಾಹನಗಳನ್ನು ಸಾಕ್ಷಿ ನೋಡಿ ಗುರುತಿಸಿಲ್ಲ. ಪೋಲಿಸರು ಛಾಯಾಚಿತ್ರಗಳಲ್ಲಿ ಕಾಣುವ ಲಾರಿ ಹಾಗೂ ಕ್ರೂಸರ್ ವಾಹವನ್ನು ಅಪಘಾತದ ವಿಚಾರವಾಗಿ ಜಪ್ತಿಪಡಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ಪ್ರಕರಣದ ಎಲ್ಲಾ ವಿಚಾರಗಳು ಗೊತ್ತಿದ್ದರೂ ಸಹ ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

<u>ಪಾಟೀ ಸವಾಲುಃ ಆರೋಪಿ ಪರ ವಕೀಲರಿಂದಃ ಇಲ್ಲ</u>

ಮರುವಿಚಾರಣೆ ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನಕ್ಕೆ ಬೆರಳಚ್ಚು ಮಾಡಲಾಯಿತು)

ಓ.ಹೇ.ಕೆ.ಸರಿ ಅದೆ.

ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ
ಪ್ರ.ದ.ನ್ಯಾದಂಡಾಧಿಕಾರಿಗಳು
ಜೇವರಗಿ